ಅಧ್ಯಕ್ಷರು : ಇದು ಸ್ವಲ್ಪ ದೊಡ್ಡದಾಗಿರುವುದರಿಂದ ಈಗ ನಿಯಮ 69ರ ಮೇಲೆ ಚರ್ಚೆಗೆ ತೆಗೆದುಕೊಂಡು ನಾಳೆ ಬೇರೆಯವರದೂ ಸೇರಿಸಿ ಒಟ್ಟಿಗೆ ತೆಗೆದುಕೊಳ್ಳೋಣ.

ಶ್ರೀಮಾನ್ ಆಶೋಕ್‌ರವರು, ಇದೂ ಅಷ್ಟೇ.

3. ವಿಷಯ :– ಪುಲಿಕೇಶಿನಗರ ವಿಧಾನಸಭಾ ಕ್ಷೇತ್ರದಲ್ಲಿ ಉದ್ಭವಿಸಿರುವ ಕುಡಿಯುವ ನೀರಿನ ಸಮಸ್ಯೆಯನ್ನು ನಿವಾರಿಸುವ ಬಗ್ಗೆ.

ಶ್ರೀ ಆರ್. ಅಖಂಡ ಶ್ರೀನಿವಾಸಮೂರ್ತಿ (ಪುಲಿಕೇಶಿ ನಗರ) :– ಮಾನ್ಯ ಅಧ್ಯಕ್ಷರೆ, ನನ್ನ ವಿಧಾನಸಭಾ ಕ್ಷೇತ್ರವಾದ ಪುಲಿಕೇಶಿ ನಗರದ ವ್ಯಾಪ್ತಿಯಲ್ಲಿ 7 ವಾರ್ಡ್‌ಗಳಿವೆ. ಅದರಲ್ಲಿ 6 ವಾರ್ಡ್‌ಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಹೆಚ್ಚಾಗಿರುವುದರಿಂದ ಒಂದು ಬಿಂದಿಗೆ ನೀರಿಗೆ 10 ರೂಪಾಯಿ ಕೊಡಬೇಕು. ವಿಧಾನಸೌಧದಿಂದ ಕೇವಲ 3 ಕಿ.ಮೀ. ನಲ್ಲಿ ನಮ್ಮ ವಿಧಾನಸಭಾ ಕ್ಷೇತ್ರವಿರುವುದು. ಇವತ್ತಿಗೂ ಕೂಡ 10 ರೂಪಾಯಿಗೆ ಒಂದು ಬಿಂದಿಗೆ ನೀರನ್ನು ತೆಗೆದುಕೊಳ್ಳಬೇಕಾದ ಪರಿಸ್ಥಿತಿ ಇದೆ. ಅಲ್ಲಿ ವಾಸಿಸುತ್ತಿರುವ ಜನರಲ್ಲಿ ಪರಿಶಿಷ್ಟ ಜಾತಿ, ಪರಿಶಿಟ್ಟ ವರ್ಗ, ಹಿಂದುಳಿದ ವರ್ಗ ಮತ್ತು ಅಲ್ಪಸಂಖ್ಯಾತರೇ ಹೆಚ್ಚಿದ್ದಾರೆ,. ಹೆಚ್ಚು ಮೂಲಭೂತ ಸೌಕರ್ಯಗಳಿಲ್ಲದ ಸ್ಥಳವಾಗಿದೆ. ನನ್ನ ಕ್ಷೇತ್ರದಲ್ಲಿ ಆಗಿರುವ ನೀರಿನ ಸಮಸ್ಯೆ ಬಗೆಹರಿಸಬೇಕೆಂದು ಕೇಳಿಕೊಳ್ಳುತ್ತೇನೆ. ಇದಕ್ಕಾಗಿ ಒಂದು ಜಿ.ಎಲ್.ಆರ್. ಪಂಪ್‌ಹೌಸ್‌ನ್ನು ಮಾಡಿಕೊಡಬೇಕೆಂದು ಮನವಿ ಮಾಡುತ್ತೇನೆ.

ಅಧ್ಯಕ್ಷರು : ಇದಕ್ಕೆ ಉತ್ತರ ಹೇಳಲು ಮಂತ್ರಿಗಳ್ಯಾರಾದರೂ ಇದ್ದಾರೆಯೇ?

ಶ್ರೀ ಸಿದ್ದರಾಮಯ್ಯ (ಮುಖ್ಯಮಂತ್ರಿಗಳು) :– ಮಾನ್ಯ ಅಧ್ಯಕ್ಷರೆ, ಬೆಂಗಳೂರು ನಗರದಲ್ಲಿ ಕುಡಿಯುವ ನೀರಿನ ಸಮಸ್ಯೆ ಬಗ್ಗೆ ವಿಚಾರವಿದೆ. ಇದು ನನಗೇ ಬರುತ್ತದೆ. ನಾನು ಮಧ್ಯಾಹ್ನದ ಮೇಲೆ ಇದಕ್ಕೆ ಉತ್ತರವ ಕೊಡುತ್ತೇನೆ.

ಅಧ್ಯಕ್ಷರು : OK.

4. ವಿಷಯ :– ಕಂದಾಯರಹಿತ ಗ್ರಾಮಗಳನ್ನು ಕಂದಾಯ ಗ್ರಾಮಗಳನ್ನಾಗಿಮಾಡುವ ಬಗ್ಗೆ.